# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 16-03-2021 ಪ್ರಶ್ನೆ ಸಂಖ್ಯೆ : 1133 (1359)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್.ಎಂ. ರಮೇಶಗೌಡ(ವಿಧಾನಸಭೆಯಿಂದಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 16-03-2021

ಉತ್ತರಿಸುವ ಸಚಿವರು: ಮಾನ್ಯ ಸಹಕಾರ ಸಚಿವರು

ವಿಷಯ : ರಾಜ್ಯದ ಎಲ್ಲಾ ವಿಧಾನಸಭೆ ಕ್ಷೇತ್ರದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಲು ಉತ್ಪಾದಕರ ಸಂಘಗಳ ಕುರಿತು

(ಅ) ರಾಜ್ಯದ ಎಲ್ಲಾ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಲು ಉತ್ಪಾದಕರ ಸಹಕಾರ ಸಂಘಗಳು ಯಾವುವು ; ಮತ್ತು ಇದರಲ್ಲಿ ನೋಂದಾಯಿಸಿಕೊಂಡಿರುವ ಸದಸ್ಯರೆಷ್ಟು ; ಇವುಗಳಲ್ಲಿ ಸ್ವಂತ ಕಟ್ಟಡಗಳನ್ನು ಹೊಂದಿರುವ ಸಂಘಗಳೆಷ್ಟು ; ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಘಗಳೆಷ್ಟು ; (ಪ್ರತಿ ಹಾಲು ಉತ್ಪಾದಕರ ಸಹಕಾರ ಸಂಘದ ಮಾಹಿತಿ ನೀಡುವುದು)

(ಆ) ಹಾಲು ಉತ್ಪಾದಕರ ಸಹಕಾರ ಸಂಘಗಳು ಸಾಮಾನ್ಯ ಸಭೆಗಳನ್ನು ನಡೆಸುವುದು ಕಡ್ಡಾಯಗೊಳಿಸಲಾಗಿದೆಯೇ ; ಹಾಗಿದ್ದಲ್ಲಿ, ಈ ಸಂಬಂಧ ಸರ್ಕಾರವು ಹೊರಡಿಸಿರುವ ಆದೇಶ/ಸುತ್ತೋಲೆಗಳನ್ನು ನೀಡುವುದು ;

(ಇ) 2019-2020ನೇ ಸಾಲಿನಲ್ಲಿ ಬೆಂಗಳೂರು ನಗರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವ್ಯಾಪ್ತಿಯಲ್ಲಿ ಸಾಮಾನ್ಯ ಸಭೆಗಳನ್ನು ನಡೆಸಿರುವ ಹಾಲು ಉತ್ಪಾದಕರ ಸಹಕಾರ ಸಂಘಗಳು ಯಾವುವು ; (ವಿವರವನ್ನು ದಾಖಲೆ ಸಹಿತ ನೀಡುವುದು)

(ಈ) ಹಾಲು ಉತ್ಪಾದಕರ ಸಹಕಾರ ಸಂಘಗಳು ರೈತರಿಂದ ಖರೀದಿಸುವ ಹಾಲಿಗೆ ಸರ್ಕಾರದಿಂದ ಬೆಂಬಲ ಬೆಲೆ/.ಸಹಾಯಧನ ನೀಡಲಾಗುತ್ತಿದೆಯೇ ; ನೀಡುತ್ತಿದ್ದಲ್ಲಿ, ಪ್ರತಿ ಲೀಟರ್‌ಗೆ ಎಷ್ಟು ರೂಪಾಯಿ ಬೆಂಬಲ ಬೆಲೆ/ಸಹಾಯಧನ ನೀಡಲಾಗುತ್ತಿದೆ; ಯಾವ ದಿನಾಂಕದವರೆಗೆ ಬೆಂಬಲ ಬೆಲೆ/ಸಹಾಯಧನ ನೀಡಲಾಗಿದೆ ? (ವಿವರ ನೀಡುವುದು)